**All India Radio: Bangalore**
**Regional Bulletin In Kannada**
**30.06.2026 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**30.06.2026 / 6.40 p.m.**
**<><><><>**

ಮುಖ್ಯಾಂಶಗಳು

1. ಮೇಕೆದಾಟು ಯೋಜನೆಗೆ ಇರುವ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸುವಂತೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೂಚನೆ
2. ಎತ್ತಿನಹೊಳೆ ಯೋಜನೆಗೆ ಜೆಜೆಎಂನಡಿ ೪ ಸಾವಿರದ ೭೦೮ ಕೋಟಿ ರೂಪಾಯಿ ವೆಚ್ಚ ಭರಿಸಲು ಕೇಂದ್ರ ಸರ್ಕಾರಕ್ಕೆ ಸಚಿವ ಈಶ್ವರ್ ಖಂಡ್ರೆ ಮನವಿ
3. ಮಾದಕ ವ್ಯಸನದ ವಿರುದ್ಧ ಸರ್ಕಾರ ಸಮರ; ಯುವಕರಲ್ಲಿ ಜಾಗೃತಿ ಮೂಡಿಸಲು ರಾಜ್ಯದಲ್ಲಿ 'ಬೇಡ ಬ್ರೋ' ಅಭಿಯಾನ
4. ಎಸ್‌ಐಆರ್ ಗೆ ರಾಜ್ಯ ಸರ್ಕಾರ ಅಡ್ಡಗಾಲು- ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪ
5. ಪರೀಕ್ಷೆ ಮುಗಿದ ಐದೇ ನಿಮಿಷದಲ್ಲಿ ಫಲಿತಾಂಶ ಪ್ರಕಟ; ಇತಿಹಾಸ ಸೃಷ್ಟಿಸಿದ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ

<><><><>

ಅಗತ್ಯ ಸುರಕ್ಷತಾ ಕ್ರಮಗಳೊಂದಿಗೆ ಬಂಡಿಪುರ-ನಾಗರಹೊಳೆ ಸಫಾರಿ ಆರಂಭಿಸಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೂಚನೆ ನೀಡಿದ್ದಾರೆ. ವಿಧಾನಸೌಧದಲ್ಲಿ ಇಂದು ನಡೆದ ಕರ್ನಾಟಕ ರಾಜ್ಯ ವನ್ಯಜೀವಿ ಮಂಡಳಿಯ ಸ್ಥಾಯಿ ಸಮಿತಿ ಸಭೆಯಲ್ಲಿ ಮೇಕೆದಾಟು ಯೋಜನೆಗೆ ಇರುವ ಸಣ್ಣ ಪುಟ್ಟ ತಾಂತ್ರಿಕ ಸಮಸ್ಯೆಗಳನ್ನು ಪರಿಣಾಮಕಾರಿಯಾಗಿ ಬಗೆಹರಿಸಲು ನಿರ್ದೇಶನ ನೀಡಿದ್ದಾರೆ. ಮೇಕೆದಾಟು ಯೋಜನೆಗೆ ಸಣ್ಣ ಪುಟ್ಟ ನೆಪಗಳನ್ನು ಮುಂದಿಟ್ಟು ಸುಪ್ರೀಂಕೋರ್ಟ್‌ನಲ್ಲಿ ತಕರಾರು ಮಾಡಲು ತಮಿಳುನಾಡು ಪ್ರಯತ್ನಿಸುತ್ತಿದ್ದು, ಈ ತಾಂತ್ರಿಕ ಸಮಸ್ಯೆಗಳನ್ನು ಪರಿಶೀಲಿಸುವಂತೆ ತಿಳಿಸಿದ್ದಾರೆ. ಸಭೆಯಲ್ಲಿ ಬಿಎಂಐಸಿ ಕಾರಿಡಾರ್ ನಿರ್ಮಾಣದಿಂದ ಆನೆ, ಹುಲಿ ಹಾಗೂ ಚಿರತೆಗಳ ಸಾಂಪ್ರದಾಯಿಕ ಸಂಚಾರ ಮಾರ್ಗಗಳಿಗೆ ಅಡ್ಡಿಯಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ಇದರ ಪರಿಣಾಮವಾಗಿ ಚನ್ನಪಟ್ಟಣ ಹಾಗೂ ರಾಮನಗರ ಭಾಗಗಳಲ್ಲಿ, ಮಾನವ-ವನ್ಯಜೀವಿ ಸಂಘರ್ಷ ಹೆಚ್ಚಾಗಲು ಕಾರಣ ಎಂದು ತಿಳಿಸಿದರು. ಈ ವೇಳೆ ಮಾತನಾಡಿದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಾರ್ವಜನಿಕರ ಸುರಕ್ಷತೆಗೆ ಆದ್ಯತೆ ನೀಡಿ ಅಪಾಯಕಾರಿಯಾಗಿರುವ ಮರಗಳು ಮತ್ತು ಕೊಂಬೆಗಳ ಗುರುತು ಪತ್ತೆ, ತೆರವು ಹಾಗೂ ತಡೆಗಟ್ಟುವ ಕ್ರಮಗಳನ್ನು ತುರ್ತಾಗಿ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

<><><><>

ಬರಪೀಡಿತ ಜಿಲ್ಲೆಗಳಿಗೆ ಕುಡಿಯುವ ನೀರು ಪೂರೈಸುವ ಎತ್ತಿನ ಹೊಳೆ ಯೋಜನೆಯ ವೆಚ್ಚದ ಪೈಕಿ ೪ ಸಾವಿರದ ೭೦೮ ಕೋಟಿ ರೂಪಾಯಿಗಳನ್ನು ಜಲಜೀವನ್ ಮಿಷನ್ ಯೋಜನೆಯಡಿಯಲ್ಲಿ ಭರಿಸುವಂತೆ ಕೇಂದ್ರ ಸರ್ಕಾರವನ್ನು ಕೋರಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಬಿ ಖಂಡ್ರೆ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್ ಹಾಗೂ ರಾಜ್ಯ ಸಚಿವ ವಿ.ಸೋಮಣ್ಣ ಅವರನ್ನು ಭೇಟಿ ಮಾಡಿ ಈ ಕುರಿತಂತೆ ಚರ್ಚಿಸಿದ್ದಾರೆ. ನೀರಿನ ಕೊರತೆ ಇರುವ, ಕೋಲಾರ, ಚಿಕ್ಕಬಳ್ಳಾಪುರ, ಹಾಸನ, ಬೆಂಗಳೂರು ಗ್ರಾಮಾಂತರ, ಚಿಕ್ಕಮಗಳೂರು, ಚಿತ್ರದುರ್ಗ, ತುಮಕೂರು ಜಿಲ್ಲೆಗಳ ಸುಮಾರು ೬ ಸಾವಿರದ ೬೫೭ ಹಳ್ಳಿಗಳು ಮತ್ತು ೩೮ ಪಟ್ಟಣಗಳ ೭೫ ಲಕ್ಷ ೫೯ ಸಾವಿರ ಜನರಿಗೆ ಕುಡಿಯುವ ನೀರು ಪೂರೈಸುವ ಯೋಜನೆಯನ್ನು  ಜೆಜೆಎಂ ಯೋಜನೆಯಡಿ ಪರಿಗಣಿಸುವಂತೆ ಕೋರಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಗ್ರಾಮೀಣ ಪ್ರದೇಶದ ಜನರಿಗೆ ಸುಸ್ಥಿರ ಮತ್ತು ಸುರಕ್ಷಿತ ಕುಡಿಯುವ ನೀರು ಸರಬರಾಜು ಮಾಡಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ರಾಜ್ಯದಲ್ಲಿ ಮಾದಕ ವಸ್ತುಗಳ ಜಾಲವನ್ನು ಸಂಪೂರ್ಣವಾಗಿ ಬೇರು ಸಹಿತ ಕಿತ್ತುಹಾಕುವ ಉದ್ದೇಶದಿಂದ ಸರ್ಕಾರ ಶೂನ್ಯ ಸಹಿಷ್ಣುತೆ ನೀತಿಯನ್ನು ಕಟ್ಟುನಿಟ್ಟಾಗಿ ಜಾರಿಗೆ ತಂದಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಅಂತಾರಾಷ್ಟ್ರೀಯ ಮಾದಕ ವ್ಯಸನ ಮತ್ತು ಕಳ್ಳಸಾಗಣೆ ವಿರೋಧಿ ದಿನ - ೨೦೨೬ ರಲ್ಲಿ ಭಾಗವಹಿಸಿ ಮಾತನಾಡಿದ ಅವರು, ಗೃಹ ಇಲಾಖೆ ಜಾರಿಗೆ ತಂದಿರುವ 'ಆಪರೇಷನ್ ರೈಸ್' ಕಾರ್ಯಕ್ರಮವನ್ನು ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ನಿರ್ವಹಿಸಲಾಗುವುದು ಎಂದು ಹೇಳಿದ್ದಾರೆ. ಯುವಕರಲ್ಲಿ ಜಾಗೃತಿ ಮೂಡಿಸಲು ವಿಶೇಷವಾಗಿ 'ಬೇಡ ಬ್ರೋ' ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಮಾದಕ ವಸ್ತುಗಳ ವಿರುದ್ಧದ ಹೋರಾಟ ಕೇವಲ ಪೊಲೀಸ್ ಇಲಾಖೆಯ ಕೆಲಸವಲ್ಲ. ಇದು ಸಮಾಜದ ಪ್ರತಿಯೊಬ್ಬರ ಜವಾಬ್ದಾರಿ ಎಂದು ತಿಳಿಸಿದ್ದಾರೆ.

<><><><>

ರಾಜ್ಯದ ಯಾವ ಜಿಲ್ಲೆಯಲ್ಲೂ ಸದ್ಯಕ್ಕೆ ಬರ ಪರಿಸ್ಥಿತಿ ಘೋಷಿಸುವ ವಾತಾವರಣ ಇಲ್ಲ ಎಂದು  ಇಂಧನ, ಪ್ರವಾಸೋದ್ಯಮ ಹಾಗೂ ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ. ಅಧಿಕಾರಿಗಳೊಂದಿಗೆ ವಿಕೋಪ ನಿರ್ವಹಣೆ ಕುರಿತು ಸಭೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂಬರುವ ದಿನಗಳಲ್ಲಿ ಮಳೆಯಾಗುವ ಆಶಾಭಾವನೆ ಇದೆ ಎಂದು ಹೇಳಿದ್ದಾರೆ. ಬರ ನಿರ್ವಹಣೆಗೆ ಅಗತ್ಯವಿರುವ ಮೇವು, ಕುಡಿಯುವ ನೀರು ಪೂರೈಕೆಯತ್ತ ಸರ್ಕಾರ ವಿಶೇಷ ಗಮನ ಹರಿಸುತ್ತಿದ್ದು, ಯಾವುದೇ ಪರಿಸ್ಥಿತಿ ಸಮರ್ಥವಾಗಿ ನಿಭಾಯಿಸಲು ಸರ್ಕಾರ ಸಿದ್ಧವಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ವಿರೋಧಿಸುತ್ತಿರುವ ರಾಜ್ಯ ಸರ್ಕಾರ, ಬಿಎಲ್ಒ ಗಳನ್ನು ನೇಮಿಸಲು ಅಡ್ಡಗಾಲು ಹಾಕಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಎಲ್‌ಒಗಳಿಗೆ ಸರ್ಕಾರ ಟಿಎ, ಡಿಎ ನೀಡದೆ ಸತಾಯಿಸುತ್ತಿದೆ ಎಂದು ದೂರಿದ್ದಾರೆ. ಇದೇ ವೇಳೆ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಾಂಗ್ರೆಸ್ ಶಾಸಕರಿರುವ ಕಡೆ ೧೦೦ ಕೋಟಿ ರೂಪಾಯಿ ಅನುದಾನ ನೀಡಿದರೆ, ಬಿಜೆಪಿ ಶಾಸಕರಿರುವ ಕಡೆ ೪೦ ರಿಂದ ೫೦ ಕೋಟಿ ರೂಪಾಯಿ ನೀಡಿದ್ದು, ಕೂಡಲೇ ಈ ತಾರತಮ್ಯವನ್ನು ನಿವಾರಿಸಬೇಕು ಎಂದು ಆಗ್ರಹಿಸಿದ್ದಾರೆ.

<><><><>

ರಾಜ್ಯದಲ್ಲಿ ಇಂದಿನಿಂದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ-ಎಸ್‌ಐಆರ್ ೨೦೨೬ ಆರಂಭಗೊಂಡಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಸಾವಯವ ಕೃಷಿಕ ಶಿವನಾಪುರ ರಮೇಶ್ ನಿವಾಸದಲ್ಲಿ ನಿಗದಿತ ನಮೂನೆಗಳನ್ನು ನೀಡಿ, ಭರ್ತಿ ಮಾಡಿಕೊಳ್ಳುವ ಮೂಲಕ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಗೆ ಜಿಲ್ಲಾಧಿಕಾರಿ ಡಾ.ಕೆ.ಎನ್.ಅನುರಾಧ ಚಾಲನೆ ನೀಡಿದರು. ಹುಬ್ಬಳ್ಳಿಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಯುಕ್ತ ಜಿಲ್ಲಾಧಿಕಾರಿ ಸ್ನೇಹಲ್ ಆರ್ ಶಾಸಕ ಮಹೇಶ್ ಟೆಂಗಿನಕಾಯಿ ಹಾಗೂ ಎಫ್.ಎಚ್.ಜಕ್ಕಪ್ಪನವರ ನಿವಾಸಕ್ಕೆ ತೆರಳಿ ನಿಗದಿತ ನಮೂನೆಗಳನ್ನು ವಿತರಿಸಿದರು. ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಯುಕ್ತ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯಾ ತಮ್ಮ ಕಾರವಾರದ ನಿವಾಸದಲ್ಲಿ ಬಿ.ಎಲ್.ಓ ಅವರಿಂದ ಎನ್ಯೂಮರೇಶನ್ ಫಾರ್ಮ್ ಸ್ವೀಕರಿಸಿದರು. ವಿಜಯಪುರ ಜಿಲ್ಲಾಧಿಕಾರಿ ಡಾ.ಆನಂದ.ಕೆ ಅವರ ನಿವಾಸಕ್ಕೆ ತೆರಳಿದ ಬಿಎಲ್‌ಒಗಳು ಗಣತಿ ನಮೂನೆಗಳನ್ನು ವಿತರಣೆ ಮಾಡಿದರು. ಕೊಪ್ಪಳ ಜಿಲ್ಲಾಧಿಕಾರಿ ಡಾ.ಸುರೇಶ ಇಟ್ನಾಳ, ಸ್ವಾತಂತ್ರ್ಯ ಹೋರಾಟಗಾರ ಸುಮಂತರಾವ್ ಪಟವಾರಿ ಅವರ ನಿವಾಸಕ್ಕೆ ತೆರಳಿ, ವಿಶೇಷ ಮತದಾರ ಪಟ್ಟಿ ಪರಿಷ್ಕರಣೆಯ ಗಣತಿ ನಮೂನೆಯನ್ನು ವಿತರಿಸಿ ಚಾಲನೆ ನೀಡಿದರು. ಕೋಲಾರ ಜಿಲ್ಲೆಯಾದ್ಯಂತ ಬಿ.ಎಲ್.ಒ ಗಳು ಪ್ರತಿ ಮನೆ ಮನೆಗೂ ಭೇಟಿ ನೀಡಿ ಗಣತಿ ನಮೂನೆ ನೀಡುವ ಕಾರ್ಯವನ್ನು ಆರಂಭಿಸಿದ್ದಾರೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ತಿಳಿಸಿದ್ದಾರೆ. ಜಿಲ್ಲೆಯ ಒಟ್ಟು ೧ ಸಾವಿರದ ೫೩೮ ಮತಗಟ್ಟೆ ಕೇಂದ್ರಗಳಿಗೆ ಸಂಬಂಧಿಸಿದಂತೆ ಸುಮಾರು ೧೨ ಲಕ್ಷಕ್ಕೂ ಅಧಿಕ ಮತದಾರರನ್ನು ತಲುಪುವ ಗುರಿಯನ್ನು ಹೊಂದಲಾಗಿದೆ ಎಂದು ಹೇಳಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಬೂತ್ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಮತದಾರರ ಮಾಹಿತಿ ಸಂಗ್ರಹ ಕಾರ್ಯದಲ್ಲಿ ತೊಡಗಿದ್ದಾರೆ. ವಿಜಯನಗರ ಜಿಲ್ಲೆಯ ಹೊಸಪೇಟೆ ತಾಲ್ಲೂಕಿನ ಕಮಲಾಪುರ ಪಟ್ಟಣದಲ್ಲಿ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ, ಸ್ವಾತಂತ್ರ್ಯ ಹೋರಾಟಗಾರ ದೇಸಾಯಿ ಗುಂಡೂರಾವ್ ಕುಟುಂಬದ ಮತದಾರರಿಗೆ ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರೂ ಆಗಿರುವ ಕಾರ್ ಮಂಚಪ್ಪ ಅವರ ಕುಟುಂಬದ ಮತದಾರರಿಗೆ ಗಣತಿ ನಮೂನೆ ನೀಡುವ ಮೂಲಕ ಅಧಿಕೃತವಾಗಿ ಚಾಲನೆ ನೀಡಿದರು.

<><><><>

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಈ ಬಾರಿ ೬ನೇ ಸೆಮಿಸ್ಟರ್ ಎಂಜಿನಿಯರಿಂಗ್ ಪರೀಕ್ಷೆ ಮುಗಿದ ಕೇವಲ ೫ ನಿಮಿಷದೊಳಗೆ ಫಲಿತಾಂಶ ಪ್ರಕಟಿಸುವ ಮೂಲಕ ಹೊಸ ಇತಿಹಾಸ ನಿರ್ಮಿಸಿದೆ. ವಿಟಿಯು ಕುಲಪತಿ ಪ್ರೊಫೆಸರ್ ಎಸ್.ವಿದ್ಯಾಶಂಕರ್ ಹಾಗೂ ಕುಲಸಚಿವರಾದ ಪ್ರೊಫೆಸರ್ ಯು.ಜೆ.ಉಜ್ವಲ್ ಹಾಗೂ ಡಾ.ಪ್ರಸಾದ ಬಿ.

ರಾಂಪುರೆ ಫಲಿತಾಂಶವನ್ನು ಜಂಟಿಯಾಗಿ ಬಿಡುಗಡೆ ಮಾಡಿದರು. ಈ ಮೂಲಕ ಈ ಹಿಂದೆ ಸೃಷ್ಟಿಸಿದ್ದ ಎಲ್ಲಾ ದಾಖಲೆಗಳನ್ನು ವಿಟಿಯು ಮುರಿದಿದೆ. ಬಿ.ಇ. ಮತ್ತು ಬಿ.ಟೆಕ್ ೬ನೇ ಸೆಮಿಸ್ಟರ್ ಪರೀಕ್ಷೆಗೆ ೬೦ ಸಾವಿರದ ೮೫೬ ವಿದ್ಯಾರ್ಥಿಗಳು ಹಾಜರಾಗಿದ್ದರು. ಇಂದು ಸಂಜೆ ೫.೩೦ಕ್ಕೆ ಪರೀಕ್ಷೆ ಅಂತ್ಯವಾಗಿದ್ದು, ೫.೩೫ಕ್ಕೆ ಫಲಿತಾಂಶವನ್ನು ವಿಶ್ವವಿದ್ಯಾಲಯ ಬಿಡುಗಡೆ ಮಾಡಿದೆ. ೨೦೨೬ರಲ್ಲಿ ಅಂತಿಮ ವರ್ಷದ ೫೬ ಸಾವಿರ ವಿದ್ಯಾರ್ಥಿಗಳ ಫಲಿತಾಂಶವನ್ನು ಪರೀಕ್ಷೆ ಮುಗಿದ ಕೇವಲ ೧೦ ನಿಮಿಷಗಳಲ್ಲಿ ಬಿಡುಗಡೆ ಮಾಡಲಾಗಿತ್ತು.

<><><><>

ಬಾಗಲಕೋಟೆ ಜಿಲ್ಲೆಯ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ತುರ್ತು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ. ಬಾಗಲಕೋಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಿಪ್ಪರಗಿ ಬ್ಯಾರೇಜ್‌ನಲ್ಲಿ ನೀರಿನ ಕೊರತೆ ಇರುವ ಹಿನ್ನೆಲೆಯಲ್ಲಿ ಸರ್ಕಾರಿ ಹಾಗೂ ಖಾಸಗಿ ಬೋರ್‌ವೆಲ್‌ಗಳು ಮತ್ತು ಬಾವಿಗಳನ್ನು ಬಳಸಿ ಜನರಿಗೆ ಕುಡಿಯುವ ನೀರು ಪೂರೈಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಹೇಳಿದ್ದಾರೆ.

<><><><>

ಮುಂದಿನ ಮೂರು ವರ್ಷಗಳಲ್ಲಿ ಜಿಬಿಎ ವ್ಯಾಪ್ತಿಯಲ್ಲಿ ಶೇಕಡಾ ೧೦೦ ರಷ್ಟು ಪ್ರಾಣಿ ಸಂತಾನ ನಿಯಂತ್ರಣ ಗುರಿ ಸಾಧಿಸಲು ಕಾರ್ಯಸೂಚಿ ಸಿದ್ಧಪಡಿಸುವಂತೆ ಜಿಬಿಎ ನಗರಾಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ವರ್ಷಕ್ಕೆ ೯೦ ಸಾವಿರ ಬೀದಿ ನಾಯಿಗಳಿಗೆ ಸಂತಾನಹರಣ ಶಸ್ತ್ರ ಚಿಕಿತ್ಸೆ ನಡೆಸಲು ನಿರ್ದೇಶನ ನೀಡಿದ್ದಾರೆ. ಇದೇ ವೇಳೆ, ಬಿಬಿಎಂಪಿ ವ್ಯಾಪ್ತಿಯಲ್ಲಿ ಗಿಡ ನೆಡುವ ಕಾರ್ಯಕ್ರಮದಲ್ಲಿ ಅತಿಯಾದ ವೆಚ್ಚ ಮತ್ತು ಭ್ರಷ್ಟಾಚಾರವಾಗಿದೆ ಎಂದು ಅಧಿಕಾರಿಗಳ ವಿರುದ್ಧ ಸಚಿವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><><><>

ಚಿಕ್ಕಬಳ್ಳಾಪುರ ಶಾಸಕ ಪ್ರದೀಪ್ ಈಶ್ವರ್, ಮಾಜಿ ಮುಖ್ಯಮಂತ್ರಿ ಅವರನ್ನು ಭೇಟಿಯಾಗಿ, ಕೆಂಪೇಗೌಡ ಜಯಂತಿ ವೇಳೆ ನಡೆದ ಘಟನೆ ಕುರಿತಂತೆ ಮಾಹಿತಿ ನೀಡಿದ್ದಾರೆ. ಈ ವೇಳೆ, ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿದ ಸಿದ್ದರಾಮಯ್ಯ ಘಟನೆಯ ಬಗ್ಗೆ ಸೂಕ್ತ ತನಿಖೆ ನಡೆಸುವಂತೆ ತಿಳಿಸಿದ್ದಾರೆ. ಪೋಲೀಸರ ಸಮ್ಮುಖದಲ್ಲಿ ಆಡಳಿತ ಪಕ್ಷದ ಶಾಸಕರಿಗೆ ಈ ರೀತಿಯಾಗಿರುವ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು. ಸಂಬಂಧಪಟ್ಟ ಅಧಿಕಾರಿಯ ವಿರುದ್ಧ ಕ್ರಮ ಜರುಗಿಸಬೇಕು ಎಂದು ಹೇಳಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>